# ಕರ್ನಾಟಕ ವಿಧಾನಸಭೆ

**(15ನೇ ವಿಧಾನಸಭೆ)**

**ಆರನೇ ಅಧಿವೇಶನ**

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ 18ನೇ ಮಾರ್ಚ್, 2020**

**(ಸಮಯ: ಬೆಳಿಗ್ಗೆ 11.00 ಗಂಟೆಗೆ)**

----

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:-**

| | | |
|---|---|---|
| ದಿನಾಂಕ: 04.03.2020ರ 1ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 4(157) | : | ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |

ಇ) **ವರ್ಗಾವಣೆಗೊಂಡ ಪ್ರಶ್ನೆ:-**

| | | |
|---|---|---|
| ದಿನಾಂಕ: 10.03.2020ರ 4ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ನಂಜೇಗೌಡ ಕೆ.ವೈ. ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 56(1066) | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು |

ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯಾ.

... 2/ ..

## 3. ವರದಿಗಳನ್ನೊಪ್ಪಿಸುವುದು

1) **ಶ್ರೀ ಸಿ.ಎಂ. ಉದಾಸಿ** (ಅಧ್ಯಕ್ಷರು, ಅಂದಾಜುಗಳ ಸಮಿತಿ) ಅವರು 2018–19ನೇ ಸಾಲಿನ ಕರ್ನಾಟಕ ವಿಧಾನಸಭೆಯ ಅಂದಾಜುಗಳ ಸಮಿತಿಯ ವಿಶೇಷ ವರದಿಯನ್ನೊಪ್ಪಿಸುವುದು.

2) **ಶ್ರೀ ಸಾ.ರಾ. ಮಹೇಶ್** (ಅಧ್ಯಕ್ಷರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ) ಅವರು 2018–19ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ 35ನೇ ವರದಿಯನ್ನೊಪ್ಪಿಸುವುದು.

## 4. ಶಾಸನ ರಚನೆ

### ವಿಧೇಯಕವನ್ನು ಮಂಡಿಸುವುದು

**ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:–**

ಅ) 2020ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

## 5. ವಿತ್ತೀಯ ಕಾರ್ಯಕಲಾಪಗಳು

1) 2020–21ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ
ಹಾಗೂ
1 ರಿಂದ 28 ರವರೆಗಿನ ಅನುದಾನ ಬೇಡಿಕೆಗಳ ಮೇಲೆ ಚರ್ಚೆ

2) 2019–20ನೇ ಸಾಲಿನ ಪೂರಕ ಅಂದಾಜುಗಳ (3ನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ.

## 6. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

**1. ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) 2020ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

... 3/ ..

**2. ಡಾ: ಅಶ್ವತ್ಥನಾರಾಯಣ ಸಿ.ಎನ್. (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–**

ಅ) 2020ನೇ ಸಾಲಿನ ಕರ್ನಾಟಕ ನಾವಿನ್ಯತಾ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**3. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–**

ಅ) 2020ನೇ ಸಾಲಿನ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**4. ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು) ಅವರು:–**

ಅ) 2020ನೇ ಸಾಲಿನ ಕರ್ನಾಟಕ ರಾಜಭಾಷಾ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಅರಗ ಜ್ಞಾನೇಂದ್ರ, ನೆಹರು ಚ. ಓಲೇಕಾರ್, ಕೆ. ರಘುಪತಿ ಭಟ್, ಲಾಲಾಜಿ ಆರ್. ಮೆಂಡನ್, ಎ.ಟಿ. ರಾಮಸ್ವಾಮಿ ಹಾಗೂ ಇವರುಗಳು –** 2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್‌ಗಳ ನೇಮಕಾತಿಯಲ್ಲಿ ಆದ ವಿಳಂಬ, ಕರ್ನಾಟಕ ಆಡಳಿತ ಮಂಡಳಿಯ ಆದೇಶ, ಸಚಿವ ಸಂಪುಟ ಸಭೆಯ ನಿರ್ಣಯ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೆ ಅನುಗುಣವಾಗಿ ಅಡ್ವೋಕೇಟ್ ಜನರಲ್ ಅವರು ನೀಡಿರುವ ಅಭಿಪ್ರಾಯಗಳ ದಾಖಲೆಗಳ ಅನುಸಾರ ಸದರಿ ಪ್ರಕರಣದಲ್ಲಿ ಸಂವಿಧಾನದ ಅನುಚ್ಛೇದ 323(2)ರ ಉಲ್ಲಂಘನೆಯಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

... 4/ ..

2) **ಶ್ರೀಯುತರುಗಳಾದ ರಾಮಲಿಂಗಾ ರೆಡ್ಡಿ, ಕೃಷ್ಣಬೈರೇಗೌಡ ಹಾಗೂ ದಿನೇಶ್ ಗುಂಡೂರಾವ್ ಇವರುಗಳು** – ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯದಲ್ಲಿ ಮೀಸಲಿಟ್ಟಿರುವ 14ನೇ ಹಣಕಾಸು ಆಯೋಗದ ಸಾಮಾನ್ಯ ಮೂಲ ಅನುದಾನದಲ್ಲಿ ಸರ್ಕಾರ, ಸ್ಥಾಯಿ ಸಮಿತಿ ಮತ್ತು ಕೌನ್ಸಿಲ್ ಸಭೆಯ ಅನುಮೋದನೆ ಇಲ್ಲದೇ ವಿವಿಧ ವಾರ್ಡ್‌ಗಳಿಗೆ ಮರುಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ ಹಾಗೂ ಸರ್ಕಾರದ ಉತ್ತರ.

## 8. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಗ್ರಾಮೀಣ ಪ್ರದೇಶಗಳ ಸರ್ಕಾರಿ ಜಮೀನುಗಳಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿರುವ ಬಡವರಿಗೆ ಹಕ್ಕು ಪತ್ರಗಳನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀ ಹೆಚ್.ಪಿ. ಮಂಜುನಾಥ್ ಅವರು** – ಹುಣಸೂರು, ವಿರಾಜಪೇಟೆ ಹಾಗೂ ಪಿರಿಯಾಪಟ್ಟಣದ ಪ್ರಾದೇಶಿಕ ಅರಣ್ಯ ಪ್ರದೇಶಗಳನ್ನು ಪರಿಸರ ಸೂಕ್ಷ್ಮವಲಯಗಳನ್ನಾಗಿ ಘೋಷಿಸಿರುವುದರಿಂದ ಜನಸಾಮಾನ್ಯರ ಜೀವನದ ಮೇಲೆ ಉಂಟಾಗುವ ಪರಿಣಾಮಗಳ ಬಗ್ಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎಂ. ಚಂದ್ರಪ್ಪ ಅವರು** – ಹೊಳಲ್ಕೆರೆ ತಾಲ್ಲೂಕು ಮಲ್ಲಾಡಿ ಗ್ರಾಮದಲ್ಲಿರುವ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕಿನಲ್ಲಿ ಬಾಬು ಜಗಜೀವನರಾಂ ಭವನ ನಿರ್ಮಾಣದ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಯವರ (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ) ಗಮನ ಸೆಳೆಯುವುದು.

5) **ಶ್ರೀ ಎಸ್. ಕುಮಾರ್ ಬಂಗಾರಪ್ಪ ಅವರು** – 2020–21 ರ ಆಯವ್ಯಯದಲ್ಲಿ ಸೊರಬ ವಿಧಾನಸಭಾ ಕ್ಷೇತ್ರದಲ್ಲಿರುವ ಕೆರೆಗಳ ಹೂಳೆತ್ತಲು ಹಾಗೂ ಅಭಿವೃದ್ಧಿ ಪಡಿಸಲು ವಿಶೇಷ ಅನುದಾನವನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

... 5/ ..

6) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ತಿಮ್ಮನಹಳ್ಳಿ ಗ್ರಾಮದ ಶ್ರೀ ಶಾರದಾ ವಿದ್ಯಾಪೀಠ ಸಂಯುಕ್ತ ಪದವಿಪೂರ್ವ ಅನುದಾನಿತ ಕಾಲೇಜಿನಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

7) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ವಿಜಯಪುರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯವನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ವಿಜಯಪುರ ಜಿಲ್ಲೆಯಲ್ಲಿ ಸುರಿದ ಅಕಾಲಿಕ ಮಳೆಯಿಂದಾಗಿ ಹಾನಿಯಾಗಿರುವ ಬೆಳೆಗೆ ನಷ್ಟ ಪರಿಹಾರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಂ.ವೈ. ಪಾಟೀಲ ಅವರು** – ಅಫಜಲಪುರ ಮತಕ್ಷೇತ್ರದ ಅನೇಕ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

10) **ಶ್ರೀ ಸಿದ್ದು ಸವದಿ ಅವರು** – ಪುರಸಭೆ ಹಾಗೂ ನಗರಸಭೆ ವ್ಯಾಪ್ತಿಯಲ್ಲಿನ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಲ್ಲಿ ಆಶ್ರಯ ಮನೆ, ಶೌಚಾಲಯ ನಿರ್ಮಿಸಿಕೊಳ್ಳಲು ಅವಕಾಶ ಕಲ್ಪಿಸಿಕೊಡುವ ಬಗ್ಗೆ ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

11) **ಶ್ರೀ ಸಂಜೀವ್ ಮಠಂದೂರು ಅವರು** – ಕೇಂದ್ರ ಸರ್ಕಾರದ ನೆಹರು ಯುವಕೇಂದ್ರದ ಮಾದರಿಯಲ್ಲಿ ರಾಜ್ಯದಲ್ಲಿಯೂ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

12) **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಲೋಕೋಪಯೋಗಿ ಮತ್ತು ಜಲಸಂಪನ್ಮೂಲ ಇಲಾಖೆಗಳನ್ನು ಪ್ರತ್ಯೇಕಿಸುವಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಿ, ಪಾರದರ್ಶಕ ಕ್ರಮಗಳನ್ನು ಕೈಗೊಂಡು ಅಧಿಕಾರಿ/ನೌಕರರುಗಳ ಜ್ಯೇಷ್ಠತೆ ಆಧಾರದ ಮೇಲೆ ಸಿ.ಇ.ಟಿ. ಕೌನ್ಸಿಲಿಂಗ್ ರೀತಿ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

... 6/ ..

13) **ಶ್ರೀ ಯು.ಟಿ. ಅಬ್ದುಲ್ ಖಾದರ್ ಅವರು** – ರಾಜ್ಯದಲ್ಲಿರುವ ವಿವಿಧ ಕಂಪನಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ನ್ಯಾಯ ಒದಗಿಸುವ ಬಗ್ಗೆ ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

14) **ಶ್ರೀ ಆರ್. ಮಂಜುನಾಥ್ ಅವರು** – ನೆಲಮಂಗಲ ತಾಲ್ಲೂಕಿನ ಎಡೇಹಳ್ಳಿ ಗ್ರಾಮದ ಸರ್ವೆ ನಂ. 3 ಮತ್ತು 4 ರ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಟ್ಟು ಬಡ ರೈತ ಕುಟುಂಬಗಳಿಗೆ ಸಹಾಯ ಮಾಡುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

15) **ಶ್ರೀ ಬಸನಗೌಡ ದದ್ದಲ ಅವರು** – ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚಿಕ್ಕ ಮಂಚಾಲ ಗ್ರಾಮದ ಹತ್ತಿರ ತುಂಗಭದ್ರಾ ನದಿಗೆ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ ಗುಂಜಳ್ಳಿ ಗ್ರಾಮದ ಬಸವ ಕೆರೆಗೆ ನೀರು ತುಂಬಿಸುವ ಯೋಜನೆಗಳ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

16) **ಶ್ರೀ ಜಿ. ಸೋಮಶೇಖರ ರೆಡ್ಡಿ ಅವರು** – ಬಳ್ಳಾರಿ ನಗರ ವ್ಯಾಪ್ತಿಯ ವಿಮ್ಸ್‌ನಲ್ಲಿ ಎಲ್.ಇ.ಡಿ. ವಿದ್ಯುತ್ ದೀಪಗಳನ್ನು ಅಳವಡಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

**ಎಂ.ಕೆ.ವಿಶಾಲಾಕ್ಷಿ**
**ಕಾರ್ಯದರ್ಶಿ(ಪ್ರ)**

---

**ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು**
***http://kla.kar.nic.in/assembly/lob/lob.htm***